ಆ) ಕುಮ್ರಿ ಮರಾಠಿಗಳು ಬುಡಕಟ್ಟು ಜನಾಂಗದವರು ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು? ನಿಲುವೇನು?

ಶ್ರೀ ಕೆ.ಎಂ.ಕೃಷ್ಣರೆಡ್ಡಿ (ಸಮಾಜ ಕಲ್ಯಾಣ ಸಚಿವರು):

ಆ) ಉತ್ತರ ಕನ್ನಡ ಜಿಲ್ಲೆಯ ಗುಡ್ಡಗಾಡು ಪ್ರದೇಶದಲ್ಲಿ ವಾಸಿಸುತ್ತಿರುವ ಕುಮ್ರಿ ಮರಾಠಿಗರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಕೋರಿ ಮನವಿಗಳು ಬಂದಿರುವುದಿಲ್ಲ.

ಆ) ಇಲ್ಲ.

ಇ) ಕುಮ್ರಿ ಮರಾಠಿಗರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಮನವಿ ಬಂದಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಸಕಇ 54 ಎಸ್ ಎಡಿ98, ದಿನಾಂಕ: 6-4-99 ರಂದು ರಚಿಸಲಾಗಿರುವ ಸಮಿತಿಯ ಮುಂದೆ ಪರಿಶೀಲನೆಗೆ ಮಂಡಿಸಲಾಗುವುದು.

ನೇಕಾರರಿಗೆ ವೃದ್ಧಾಪ್ಯ ಮಿತ್ರ ಯೋಜನೆ.

1509( 2125)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) 1993 ರಲ್ಲಿ ನೇಕಾರರಿಗೆ ವೃದ್ಧಾಪ್ಯ ಮಿತ್ರ ಎಂಬ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗುವುದೆಂದು ಸರ್ಕಾರ ಘೋಷಣೆ ಮಾಡಿದ್ದು ನಿಜವೇ?

ಆ) ಹಾಗಿದ್ದಲ್ಲಿ ಎಂದಿನಿಂದ ಈ ಯೋಜನೆಯನ್ನು ಜಾರಿಗೆ ತರಲಾಗಿದೆ?

ಇ) ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಶ್ರೀ ಸಿ.ಎಂ.ಉದಾಸಿ (ಜವಳಿ ಸಚಿವರು):

ಅ) ನಿಜ.

ಆ ಮತ್ತು ಇ) ಸದರಿ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿದೆ.